ಇರುವ ಕೊಳ್ಳಗಳು, ಕೃಷಿಗೆ ಅನುಕೂಲವಾಗುವ ವಿಸ್ತೃತವಾದ ಪ್ರದೇಶ ಇಲ್ಲದಿರುವುದು ಮುಂತಾದ ಕಾರಣಗಳಿಂದಾಗಿ ಇಲ್ಲಿನ ನೀರನ್ನು ನೀರಾವರಿಗೆ ಉಪಯೋಗಿಸಿಕೊಳ್ಳಲು ಸಾಧ್ಯವಾಗಿರುವುದಿಲ್ಲ.

ಆ) ಉತ್ತರಕನ್ನಡ ಜಿಲ್ಲೆಯ ನದಿಗಳ ನೀರು ನೀರಾವರಿಗೆ ಉಪಯುಕ್ತವಾಗುತ್ತಿರುವುದಿಲ್ಲವೆಂಬುದು ಗಮನಕ್ಕೆ ಬಂದಿದೆ.

ಇ) ಉತ್ತರಕನ್ನಡ ಜಿಲ್ಲೆಯ 7 ನೀರಾವರಿ ಯೋಜನೆಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ, ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಹಸ್ತಾಂತರಿಸಲಾಗಿದೆ. ಹೊನ್ನಾವರ ತಾಲ್ಲೂಕಿನ ಚಂದಾವರ ಊರಿನ ಹತ್ತಿರ ಚಂದಾವರ ಹಳ್ಳ ಹಾಗೂ ತೇವರ ಹಳ್ಳ ಕೂಡುವಲ್ಲಿ ಬ್ಯಾರೇಜ್ ನಿರ್ಮಾಣ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಕುರಿತು ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಉತ್ತರಕನ್ನಡ ಜಿಲ್ಲೆಯಲ್ಲಿ ಹಲವಾರು ಮೂಲಗಳಿಂದ ನೀರಾವರಿಯಾಗುತ್ತಿರುವ ಪ್ರದೇಶಗಳ ವಿವರಗಳು ಈ ಕೆಳಗಿನಂತಿದೆ:

ಕೆರೆಗಳಿಂದ	5,107 ಹೆಕ್ಟೇರುಗಳು
ಬಾವಿಗಳಿಂದ	5,151 ಹೆಕ್ಟೇರುಗಳು
ಕೊಳವೆ ಬಾವಿಗಳಿಂದ	1,203 ಹೆಕ್ಟೇರುಗಳು
ಏತ ನೀರಾವರಿಯಿಂದ	385 ಹೆಕ್ಟೇರುಗಳು
ಇತರೆ ಮೂಲಗಳಿಂದ	9,193 ಹೆಕ್ಟೇರುಗಳು
ಒಟ್ಟು	**21,039 ಹೆಕ್ಟೇರುಗಳು**

ಈ) ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಹಸ್ತಾಂತರಿಸಲಾಗಿರುವ 7 ನೀರಾವರಿ ಯೋಜನೆಗಳನ್ನು ಅನುದಾನಗಳ ಲಭ್ಯತೆಯ ಮೇರೆಗೆ ಕಾಲಬದ್ಧ ಕಾರ್ಯಕ್ರಮ ಹಾಕಿಕೊಂಡು ಅನುಷ್ಠಾನಗೊಳಿಸಲಾಗುವುದು.

1022 (1095) ಶ್ರೀ ಮೋಹನ್‌ಕೃಷ್ಣ ಶೆಟ್ಟಿ (ಕುಮಟಾ): ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಕುಮಟಾ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸರ್ಕಾರಿ ಕಲಾ, ವಾಣಿಜ್ಯ, ವಿಜ್ಞಾನ ಪದವಿ ಶಿಕ್ಷಣ ಕಾಲೇಜನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಡವರು, ಮಧ್ಯಮ ವರ್ಗದವರು ಖಾಸಗಿ ಕಾಲೇಜಿನ ದುಬಾರಿ ಶಿಕ್ಷಣದ ಕಾರಣ ಪದವಿ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕುಮಟಾದಲ್ಲಿ ಸರ್ಕಾರ ಕಲಾ, ವಾಣಿಜ್ಯ, ವಿಜ್ಞಾನ ಪದವಿ ಕಾಲೇಜು ಪ್ರಾರಂಭಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

ಈ) ಯಾವಾಗ ಸರ್ಕಾರಿ ಪದವಿ ಕಾಲೇಜನ್ನು ಪ್ರಾರಂಭಿಸಲಾಗುವುದು?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಇಲ್ಲಾ

ಇ) 2007–08ನೇ ಸಾಲಿನಿಂದ ಕುಮಟಾದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಪರಿಶೀಲಿಸಲಾಗುತ್ತಿದೆ.

ಈ) ಮೇಲಿನಂತೆ.

1023 (1230) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಚಿಕ್ಕಬಳ್ಳಾಪುರ ನಗರ ಪದವಿ ಪೂರ್ವ ಕಾಲೇಜು, ಪ್ರೌಢಶಾಲಾ ವಿಭಾಗದಲ್ಲಿ ಬಾಲಕ;ಬಾಲಕಿಯರಿಗೆ ಪ್ರತ್ಯೇಕ ವಿಭಾಗಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಪದವಿ ಪೂರ್ವ ಕಾಲೇಜು ವಿಭಾಗದಲ್ಲಿ ಪ್ರತ್ಯೇಕ ಬಾಲಕಿಯರ ವಿಭಾಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;